ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 39 ಜಿಎವಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 03.12.2015

ಇಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560 001.

ಇವರಿಗೆ
<u>ಇವರಿಗೆ:</u>

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
4. ಸರ್ಕಾರದ ಉಪಕಾರ್ಯದರ್ಶಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ, ಉನ್ನತ ಶಿಕ್ಷಣ ಇಲಾಖೆ.
5. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–560 056.
6. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು–570 005.
7. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ–580 003.
8. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗ–585 106.
9. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು–574 199.
10. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್–577 451.
11. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು–572 101
12. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ–583 276.
13. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು–570 006.
14. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ–586 101
15. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾಂ–590 014.
16. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾಂ.
17. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
18. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
19. ಕುಲಸಚಿವರು, ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
20. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು –560 018.
21. ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ವಿಜಯನಗರ, ಬೆಂಗಳೂರು.
22. ರಾಜ್ಯ ಮಾಹಿತಿ ಅಧಿಕಾರಿ, ಎನ್.ಐ.ಸಿ ಬೆಂಗಳೂರು.
23. ಸಮನ್ವಯಾಧಿಕಾರಿ, ಇ–ಆಡಳಿತ, ಉನ್ನತ ಶಿಕ್ಷಣ ಇಲಾಖೆ,

ಮಾನ್ಯರೆ,

ವಿಷಯ:– ಕರ್ನಾಟಕ ರಾಜ್ಯ ವ್ಯಾಪ್ತಿಯ ವಿಶ್ವವಿದ್ಯಾಲಯಗಳು, ಕಾಲೇಜುಗಳು, ಪಾಲಿಟೆಕ್ನಿಕ್, ಬಿ.ಇಡಿ ಕಾಲೇಜುಗಳನ್ನು ಸಂಪೂರ್ಣ ಇ–ಆಡಳಿತಗೊಳಿಸಿ, ಆನ್‌ಲೈನ್ ಪರೀಕ್ಷಾ ಪದ್ಧತಿಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ:– ಸರ್ಕಾರದ ಆದೇಶ ಸಂಖ್ಯೆ:ಇಡಿ 03 ಇಜಿಹೆಚ್ 01 2015, ದಿ:04.07.2015

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿರಂತರವಾಗಿ ಹೆಚ್ಚುತ್ತಿರುವ ವಿದ್ಯಾರ್ಥಿಗಳಿಗೆ ಆಧುನಿಕ ಶಿಕ್ಷಣ ನೀಡಲು ಮತ್ತು ಉನ್ನತ ಶಿಕ್ಷಣ ವ್ಯವಸ್ಥೆಯಲ್ಲಿ ಉತ್ಕೃಷ್ಟತೆ ಮತ್ತು ದಕ್ಷತೆಗಳನ್ನು ಮೂಡಿಸಲು ಮಾಹಿತಿ ಸಂವಹನ

ತಂತ್ರಜ್ಞಾನವನ್ನು (Information communication Technologies-ICT) ವ್ಯವಸ್ಥೆಯ ಎಲ್ಲಾ ಸ್ತರಗಳಲ್ಲಿ ಅವಳವಡಿಸುವ ಅಗತ್ಯತೆಯನ್ನು ಮನಗೊಂಡು 2014-15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದ್ದ ಜ್ಞಾನ ಸಂಗಮ ಯೋಜನೆಯನ್ನು ಉಲ್ಲೇಖಿತ ಸರ್ಕಾರದ ಆದೇಶದನ್ವಯ, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು, ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಒಳಗೊಂಡಂತೆ ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಮೂಲಭೂತ ಐಸಿಟಿ ಸೌಲಭ್ಯಗಳನ್ನು ಒದಗಿಸುವ ಮೂಲಕ ಆದೇಶ ಹೊರಡಿಸಲಾಗಿದೆ.

ಈ ರೀತಿ ಜಾರಿಗೊಳಿಸಲಾಗಿರುವ ಸರ್ಕಾರದ ಮಹತ್ವಕಾಂಕ್ಷಿ ಜ್ಞಾನ ಸಂಗಮ ಮಾಹಿತಿ ಸಂವಹನ ತಂತ್ರಜ್ಞಾನ (Information communication Technologies-ICT) ಯೋಜನೆಯನ್ನು ವಿದ್ಯಾರ್ಥಿಗಳ ಹಿತದೃಷ್ಟಿ ಹಾಗೂ ಶೈಕ್ಷಣಿಕ ಗುಣಮಟ್ಟವನ್ನು ವೃದ್ಧಿಸುವ ಮತ್ತು ಶೈಕ್ಷಣಿಕ ಸುಧಾರಣೆ ಕ್ರಮಗಳನ್ನು ತ್ವರಿತಗೊಳಿಸುವ ಸದುದ್ದೇಶದಿಂದ, ತಮ್ಮ ಅಧಿಕಾರ ವ್ಯಾಪ್ತಿ/ಆಡಳಿತ ನಿಯಂತ್ರಣಕ್ಕೆ ಒಳಪಡುವ ಸರ್ಕಾರಿ ಅನುದಾನಿತ, ಖಾಸಗಿ ಹಾಗೂ ಸಂಯೋಜಿತ ಕಾಲೇಜುಗಳು/ಶೈಕ್ಷಣಿಕ ಸಂಸ್ಥೆ ಮತ್ತು ಬಿ.ಇಡಿ ಕಾಲೇಜುಗಳಲ್ಲಿ ಆದ್ಯತೆ ಮೇರೆಗೆ ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿದೆ.

ನಿರಂತರ ಮೇಲುಸ್ತುವಾರಿ ಹಾಗೂ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸಿ ತಮ್ಮ ಅಧಿಕಾರ ವ್ಯಾಪ್ತಿ/ಆಡಳಿತ ನಿಯಂತ್ರಣಕ್ಕೆ ಒಳಪಡುವ ಸರ್ಕಾರಿ ಅನುದಾನಿತ, ಖಾಸಗಿ ಹಾಗೂ ಸಂಯೋಜಿತ ಕಾಲೇಜುಗಳು/ಶೈಕ್ಷಣಿಕ ಸಂಸ್ಥೆ, ತಾಂತ್ರಿಕ ಮತ್ತು ಬಿ.ಇಡಿ ಕಾಲೇಜುಗಳಲ್ಲಿ ಈ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುತ್ತಿರುವ/ಅನುಷ್ಠಾನಗೊಳಿಸಿರುವ ಬಗ್ಗೆ ದೃಢಪಡಿಸಿಕೊಂಡು ವರದಿ ಸಲ್ಲಿಸುವಂತೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಕೆ.ಎಲ್.ಸುಬ್ರಮಣ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-2)